2 ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆ.ಎಮ್.ಎಫ್.ಸಿ. ನ್ಯಾಯಾಲಯ, ನಂಜನಗೂಡು

**ಸಿ. ಸಿ. ನಂ.ಃ199/17**

ಆರೋಪಿಯ ಹೆಸರು ಮಂಜುನಾಥ ಬಿನ್ ಲೇಃ ರಾಮಣ್ಣ, 47 ವರ್ಷ,

ವಾಸ್ತವ್ಯ ಕುರಿಹುಂಡಿ ಗ್ರಾಮ, ಹುಲ್ಲಹಳ್ಳಿ ಹೋಬಳಿ,
ನಂಜನಗೂಡು ತಾಲ್ಲೂಕು.

ಅ. ಪ್ರ. ಸಂ. ಕಲಂ 313ರನ್ವಯ ಆರೋಪಿಯ ಹೇಳಿಕೆ

ಪ್ರಶ್ನೆ 1ಃ ನೀವು ಸಾಕ್ಷಿದಾರರ ಹೇಳಿಕೆಗಳನ್ನು ಕೇಳಿದ್ದೀರಾ?

ಉತ್ತರ ಃ

ಪ್ರಶ್ನೆ 2ಃ ಫ್ರಾಸಾ-1 ಮಹದೇವು, ಇವರು ತಮ್ಮ ಸಾಕ್ಷ್ಯದಲ್ಲಿ ಹೇಳುವುದೇನೆಂದರೆ ಆರೋಪಿಯಾದ ನೀವು ಹಾಗೂ ಫ್ರಾಸಾ-1 ರವರು ಪರಿಚಯಸ್ಥರಾಗಿದ್ದು, ಸದರಿ ಪರಿಚಯದ ಆಧಾರದ ಮೇಲೆ ಆರೋಪಿಯಾದ ನೀವು ನಿಮ್ಮ ದರದು ನಿಮಿತ್ತ ಅಂದರೆ ಮುಬ್ಬೆ ಸಾಲಗಳನ್ನು ತೀರಿಸಲು ಮತ್ತು ಮನೆಯ ವ್ಯವಹಾರದ ಅವಶ್ಯಕತೆಗೋಸ್ಕರವಾಗಿ ಹಣದ ಅವಶ್ಯಕತೆಯಿದೆ ಎಂದು ಫಿರ್ಯಾದುದಾರರನ್ನು ಭೇಟಿ ಮಾಡಿ ರೂ.6,00,000/- ಗಳನ್ನು ಸಾಲವಾಗಿ ಪಡೆದುಕೊಂಡು, ಸದರಿ ಸಾಲವನ್ನು 04 ತಿಂಗಳೊಳಗಾಗಿ ಮರುಪಾವತಿ ಮಾಡುವುದಾಗಿ ಒಪ್ಪಿರುತ್ತಾರೆ ಎಂದು ಸಾಕ್ಷ್ಯ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಿ?

ಉತ್ತರಃ

ಪ್ರಶ್ನೆ 3 ಫ್ರಾಸಾ-1 ರವರು ತಮ್ಮ ಸಾಕ್ಷ್ಯದಲ್ಲಿ ಮುಂದುವರೆದು ಆರೋಪಿಯಾದ ನೀವು ಸದರಿ ಸಾಲದ ಬಾಬ್ತು ನಿಮ್ಮ ಖಾತೆ ಹೊಂದಿರುವ ಕಾವೇರಿ ಕಲ್ಪತರು ಗ್ರಾಮೀಣಾ ಬ್ಯಾಂಕ್, ಹುಲ್ಲಹಳ್ಳಿ ಶಾಖೆ ನಂಜನಗೂಡು ಚಕ್ ನಂಃ349661 ನ್ನು ರೂ.6,00,000/–ಗಳಿಗೆ ದಿಃ08.09.2016 ಎಂದು ನಮೂದಿಸಿ ಫ್ರಾಸಾ-1 ರವರಿಗೆ ನೀಡಿದ್ದು ಸದರಿ ಚಕ್ಕನ್ನು ಫ್ರಾಸಾ-1 ರವರು ನಗದೀಕರಣ ಪಡಿಸಲು ತಮ್ಮ ಖಾತೆಯಿರುವ ಇಂಡಿಯಾನ್ ಬ್ಯಾಂಕ್, ನಂಜನಗೂಡು ಶಾಖೆಗೆ ಹಾಜರುಪಡಿಸಿದಾಗ ಆರೋಪಿಯ ಖಾತೆಯಲ್ಲಿ ಸಾಕಷ್ಟು ಹಣವಿಲ್ಲ ಎಂಬ ಹಿಂಬರಹದೊಂದಿಗೆ ದಿಃ14.09.2016 ರಂದು ವಾಪಸ್ಸು ಬಂದಿದ್ದಾಗಿ ಸಾಕ್ಷ್ಯ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಿ?

ಉತ್ತರಃ

ಪ್ರಶ್ನೆ 4 ಫ್ರಾಸಾ-1 ರವರು ಮುಂದುವರೆದು ಅವರ ಪರ ವಕೀಲರ ಮೂಲಕ ದಿಃ19.09.2016 ರಂದು ಕಾನೂನು ರೀತ್ಯಾ ನೋಟಿಸನ್ನು ನೀಡಿದ್ದು, ಸದರಿ

ನೋಟೀಸ್ ಜಾರಿಯಾಗಿದ್ದು, ಸದರಿ ನೋಟೀಸಿಗೆ ಆರೋಪಿಯಾದ ನೀವು ಸುಳ್ಳು ಜವಾಬನ್ನು ದಿ:07.10.2016 ರಂದು ನೀಡಿದ್ದು, ಹಣವನ್ನು ಮರುಪಾವತಿ ಮಾಡದೆ ಕಲಂ 138 ನೆಗೋಶಿಯಬಲ್ ಇನ್ಸ್ಟ್ರುಮೆಂಟ್ ಆಕ್ಟ್ ಪ್ರಕಾರ ಅಪರಾಧ ಮಾಡಿರುವಿರಿ ಎಂದು ಸಾಕ್ಷ್ಯ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಿ?

ಉತ್ತರ :

ಪ್ರಶ್ನೆ 5 ನಿಮಗೆ ಇನ್ನೂ ಏನಾದರೂ ಹೇಳುವುದು ಇದೆಯಾ?

ಉತ್ತರ :

ಪ್ರಶ್ನೆ 6: ನಿಮ್ಮ ಪರ ಸಾಕ್ಷಿ ವಿಚಾರಣೆ ಮಾಡುವಿರಾ ?

ಉತ್ತರ :

ಫಿರ್ಯಾದುದಾರರ ಪರ ಸಾಕ್ಷಿದಾರರ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ದಿನಾಂಕ:07.03.2023 ರಂದು ಆರೋಪಿಗೆ ಓದಿ ಹೇಳಿ ಅವರು ಕೊಟ್ಟ ಉತ್ತರವನ್ನು ಯಥಾವತ್ತಾಗಿ ನಮೂದಿಸಿಕೊಳ್ಳಲಾಯಿತು.

2 ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆ.ಎಮ್.ಎಫ್.ಸಿ.
ನಂಜನಗೂಡು